ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ:-ಸಿ1(1)ಇತರೆ.ಪಿಯುಸಿ.ಪ.60/2012-13 ದಿನಾಂಕ:24-06-2014

## ಅಧಿಕೃತ ಜ್ಞಾಪನ

ವಿಷಯ:-2014ನೇ ಸಾಲಿನ ಜುಲೈ ನಲ್ಲಿ ನಡೆಯಲಿರುವ ದ್ವಿತೀಯ ಪಿ.ಯು.ಸಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳನ್ನು ಜಿಲ್ಲಾ ಮತ್ತು ತಾಲ್ಲೂಕು ಖಜಾನೆಗಳಲ್ಲಿ ಠೇವಣಿಸಿ ಪರೀಕ್ಷಾ ಕೇಂದ್ರಗಳಿಗೆ ವಿತರಿಸುವಲ್ಲಿ ಸುರಕ್ಷತೆಯನ್ನು ಕಾಪಾಡುವ ಬಗ್ಗೆ.

ಉಲ್ಲೇಖ:-ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ರವರ ಅ.ಸ. ಪತ್ರ ಸಂಖ್ಯೆ:ಪಪೂಶಿ.ಪರೀಕ್ಷೆ.ದ್ವಿ.ಪಿ.ಪ/2014-15 ದಿನಾಂಕ:19-06-2014

-&&&-

2014ರ ಜುಲೈನಲ್ಲಿ ದ್ವಿತೀಯ ಪಿ.ಯು.ಸಿ ಪರೀಕ್ಷೆಯು ದಿನಾಂಕ:03.07.2014 ರಿಂದ 12.07.2014 ರವರೆಗೆ ರಾಜ್ಯಾದ್ಯಾಂತ ನಿಗದಿತ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪ್ರತಿ ವರ್ಷದಂತೆ ಈ ವರ್ಷ ನಡೆಯಲ್ಲಿರುವ ಪರೀಕ್ಷೆಗೆ ಸಂಬಂಧಿಸಿದಂತೆ ಪ್ರಶ್ನೆ ಪತ್ರಿಕೆಗಳನ್ನು ಪರೀಕ್ಷಾ ಕೇಂದ್ರಗಳಿಗೆ ವಿತರಿಸಲು ವಿಶೇಷ ಪ್ರಶ್ನೆ ಪತ್ರಿಕಾ ಪಾಲಕರುಗಳಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಸರ್ಕಾರದ ಸೂಚನೆಯಂತೆ ನೇಮಿಸಲಾಗುತ್ತಿದೆ. **ಗೌಪ್ಯ ವಸ್ತುಗಳನ್ನು ದಿನಾಂಕ:30-06-2014 ರಿಂದ 01-07-2014 ರವರೆಗೆ ಜಿಲ್ಲಾ ಮತ್ತು ತಾಲ್ಲೂಕು ಖಜಾನೆಗಳಿಗೆ ವಿತರಿಸಲಾಗುವುದು.** ಸಂಬಂಧಿಸಿದವರು ಖಜಾನೆಯಲ್ಲಿ ಹಾಜರಿದ್ದು, ನಿಗದಿತ ಸಮಯದಲ್ಲಿ ಗೋಪ್ಯ ವಸ್ತುಗಳನ್ನು ಸ್ವೀಕರಿಸಿ ಠೇವಣಿಸಲು ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಹಕರಿಸುವಂತೆ ಆದೇಶ ನೀಡಲು ಉಲ್ಲೇಖ ಪತ್ರಗಳಲ್ಲಿ ಈ ಕಛೇರಿಗೆ ಕೋರಿರುತ್ತಾರೆ.

ದ್ವಿತೀಯ ಪಿ.ಯು.ಸಿ ಪರೀಕ್ಷೆಗಳಿಗೆ ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ಪರೀಕ್ಷಾ ಪ್ರಶ್ನೆ ಪತ್ರಿಕೆಗಳ ಬಂಡಲ್‌ಗಳನ್ನು ಸರಬರಾಜು ಮಾಡುವ ದಿನ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಇತರ ತಂಡದ ಸದಸ್ಯರೊಂದಿಗೆ ಬಂಡಲುಗಳನ್ನು ಮಾರ್ಗಾಧಿಕಾರಿಗಳಿಂದ ಪಡೆದು ಖಜಾನೆಯಲ್ಲಿ ಅಭಿರಕ್ಷಣೆಯಲ್ಲಿಡುವ ಕಾರ್ಯವನ್ನು ನಿರ್ವಹಿಸಲು ಸೂಚಿಸಿದೆ. ಹಾಗೆಯೇ ಪರೀಕ್ಷಾ ದಿನಗಳಂದು ಸರಿಯಾದ ವೇಳೆಗೆ ಖಜಾನೆಯಿಂದ ಸಂಬಂಧಿಸಿದ ಪ್ರಶ್ನೆ ಪತ್ರಿಕೆ ಬಂಡಲ್‌ಗಳನ್ನು ಹೊರ ತೆಗೆದು ಪರೀಕ್ಷೆ ಕೇಂದ್ರಗಳ ಮುಖ್ಯ ಅಧೀಕ್ಷಕರಿಗೆ ಸುರಕ್ಷಿತವಾಗಿ ಹಸ್ತಾಂತರಿಸಲು ತಿಳಿಸಿದೆ.

ಪ್ರಶ್ನೆ ಪತ್ರಿಕೆಗಳನ್ನು ಖಜಾನೆಯಲ್ಲಿ ಠೇವಣಿಸಿ ಪ್ರತಿದಿನ ಆಯಾ ಪರೀಕ್ಷಾ ಕೇಂದ್ರಗಳಿಗೆ ಸರಬರಾಜು ಮಾಡುವ ಕಾರ್ಯವು ಅತ್ಯಂತ ಜವಾಬ್ದಾರಿಯುತ ಕಾರ್ಯವಾಗಿರುವುದರಿಂದ ಈ ಕಾರ್ಯಕ್ಕೆ ನೇಮಕಾತಿ ಹೊಂದಿರುವ ಕ್ಷೇತ್ರ ಶಿಕ್ಷಣಾಧಿಕಾರಿಗಳು ಖುದ್ದಾಗಿ ಹಾಜರಾಗಿ ಸಮರ್ಪಕವಾಗಿ ಕರ್ತವ್ಯ ನಿರ್ವಹಿಸದೇ ಇದ್ದಲ್ಲಿ ಹಲವಾರು ಸಮಸ್ಯೆಗಳು ಉದ್ಭವವಾಗುತ್ತದೆ. ಆದ ಕಾರಣ ದ್ವಿತೀಯ ಪಿ.ಯು.ಸಿ ಪರೀಕ್ಷೆಗಳ ಕಾರ್ಯಕ್ಕೆ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ನೇಮಕಾತಿ ಹೊಂದಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗು ಶಿಕ್ಷಣ ಸಂಯೋಜಕರು ಪ್ರಶ್ನೆ ಪತ್ರಿಕೆಗಳ ಸುರಕ್ಷತೆ ಮತ್ತು ವಿತರಣಾ ಕಾರ್ಯವನ್ನು ಜವಾಬ್ದಾರಿಯಾಗಿ ನಿರ್ವಹಿಸಲು ಹಾಗು ಪರೀಕ್ಷೆಗಳನ್ನು ಕಟ್ಟುನಿಟ್ಟಾಗಿ ನಡೆಸುವಲ್ಲಿ ಸಂಪೂರ್ಣ ಸಹಕಾರ ನೀಡಬೇಕೆಂದು ಈ ಮೂಲಕ ಸೂಚಿಸಲಾಗಿದೆ.

ಸದರಿ ಕಾರ್ಯವನ್ನು ಸಮರ್ಪಕವಾಗಿ ಸ್ವತ: ಜವಾಬ್ದಾರಿಯಿಂದ ನಿರ್ವಹಿಸದೇ ಪರೀಕ್ಷಾ ಕಾರ್ಯಕ್ಕೆ ಅಡಚಣೆ ಉಂಟಾಗಲು ಕಾರಣರಾಗುವ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮ ತೆಗೆದುಕೊಳ್ಳಲಾಗುವುದು.

[ಕೆ.ಎಸ್.ವೆಂಕಟೇಶಪ್ಪ] 24/6

ಅಪರ ಆಯುಕ್ತರು [ಆಡಳಿತ]

24/6/14

ಇವರಿಗೆ:-

ರಾಜ್ಯದಲ್ಲಿರುವ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ / ಶಿಕ್ಷಣ ಸಂಯೋಜಕರಿಗೆ

ಪ್ರತಿಯನ್ನು:

1. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
2. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು-3
3. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರುಗಳಿಗೆ ಮಾಹಿತಿಗಾಗಿ
4. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ
5. ಸಹನಿರ್ದೇಶಕರು (ಆಡಳಿತ) ರವರ ಆಪ್ತ ಶಾಖೆ
6. ಕಛೇರಿ ಪ್ರತಿ

*\\Typing3server\e\D\EST1\Suttole-Prashna-Patrike[PUC-1].doc*